ಅ) ಹೌದು

ಆ) ಆಯವ್ಯಯದ ಲಭ್ಯತೆಯನ್ನಾಧರಿಸಿ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು.

100 ಹಾಸಿಗೆಗಳ ಆಸ್ಪತ್ರೆ ಕಟ್ಟಡ ಮತ್ತು ಖಾಲಿ ಹುದ್ದೆಗಳ ಭರ್ತಿ ಮಾಡುವುದು.

589 (760) ಶ್ರೀ ತುಕಾರಾಮ್ .ಇ(ಸಂಡೂರ್): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳನ್ನು ಉತ್ತರಿಸುವರೆ:

ಅ) ಸಂಡೂರ್ ಪಟ್ಟಣದಲ್ಲಿ 100 ಹಾಸಿಗೆಗಳ ಸುಸಜ್ಜಿತವಾದ ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ಇದನ್ನು ಆದಷ್ಟು ಬೇಗನೆ ಉದ್ಘಾಟನೆ ಮಾಡಲಾಗುವುದೆಂದು ಕಳೆದ ಅಧಿವೇಶನದಲ್ಲಿ ಮಾನ್ಯ ಮಂತ್ರಿಗಳು ಈ ಹಿಂದೆ ಭರವಸೆಯನ್ನು ನೀಡಿದ್ದು, ಇನ್ನೂ ಉದ್ಘಾಟನೆ ಮಾಡದೇ ಇರಲು ಕಾರಣವೇನು ;

ಆ) ಸದರಿ ಕಟ್ಟಡವನ್ನು ಸಾರ್ವಜನಿಕರ ಉಪಯೋಗಕ್ಕೆ ಯಾವಾಗ ಒದಗಿಸಲಾಗುವುದು;

ಇ) ಸದರಿ 100 ಹಾಸಿಗೆಗಳ ಆಸ್ಪತ್ರೆಯಲಿ ಮತ್ತು ತಾಲ್ಲೂಕಿನ ಹಲವಾರು ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ವಿವರಗಳನ್ನು ಒದಗಿಸುವುದು ?

ಶ್ರೀ ಬಿ. ಶ್ರೀರಾಮುಲು : (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸಂಡೂರು ಪಟ್ಟಣದಲ್ಲಿ ಪ್ರಸ್ತುತ 50 ಹಾಸಿಗೆಗಳ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದೆ. ಸದರಿ ಆಸ್ಪತ್ರೆಯನ್ನು 100 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸಲಾಗಿದೆ. ಸದರಿ ನೂತನ ಕಟ್ಟಡವನ್ನು ಈ ಅಧೀವೇಶನ ಮುಗಿದ ನಂತರ ಸಾರ್ವಜನಿಕರ ಅನುಕೂಲಕ್ಕಾಗಿ ಸಮರ್ಪಿಸಲಾಗುವುದು.

ಇ) ಬಂದಿದೆ.

ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ.

1. (1) ಮಕ್ಕಳ ತಜ್ಞರು, 2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಟ ರೂ. 50,000 ರವರೆಗೆ ಗೌರವ ಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್.ಹೆಚ್.ಎಂ) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ. 500, (2) ಅರೆವಳಿಕೆ ತಜ್ಞರಿಗೆ ರೂ. 1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ. 1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

2. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ: 1 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ. 5,000

ಗೌರವ ಧನ ನೀಡಿ ರಿಟೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

3. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

4. ಇಲಾಖೆಯಲ್ಲಿ ಖಾಲಿ ಇರುವ562 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗವು ಆಯ್ಕೆ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿದ್ದು, ನೇಮಕಾತಿ ಆದೇಶ ಹೊರಡಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ವೈದ್ಯರಿಗೆ ಸ್ಥಳನಿಯುಕ್ತಿ ಣೀಡುವ ಸಮಯದಲ್ಲಿ ಆದ್ಯತಾನುಸಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ.